

ಅರುಣ ಪಿ. ಭಟ್ಟ

# ವಾರದ ಭವಿಷ್ಯ 18.11.2021ರಿಂದ 24.11.2021ರವರೆಗೆ



### ಮೇಷ

ಕುಟುಂಬ ಸದಸ್ಯರ ಜತೆಗೆ ಮಾತನಾಡುವಾಗ ಎಚ್ಚರಿಕೆಯಿಂದ ಇರಬೇಕು. ರಾಜಕೀಯದಲ್ಲಿ ಇರುವವರಿಗೆ ಪ್ರಗತಿ ಇದೆ. ಹೊಸ ಉದ್ಯೋಗಕ್ಕೆ ಪ್ರಯತ್ನಿಸುತ್ತಿರುವವರಿಗೆ ನಿರೀಕ್ಷಿತ ಯಶಸ್ಸು ದೊರೆಯುವ ಸಾಧ್ಯತೆ ಹೆಚ್ಚಿದೆ. ಕುಟುಂಬದವರ ಜತೆಗೆ ಸೇರಿ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದೀರಿ. ವಾರದ ಶುರುವಿನಲ್ಲಿ ಸ್ವಲ್ಪ ಮಟ್ಟಿಗೆ ಆರೋಗ್ಯ ಸಮಸ್ಯೆ ಕಾಡಬಹುದು. ಶುಭದಿನ 19. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.



### ವೃಷಭ

ಆಸ್ತಿ ಖರೀದಿ ವ್ಯವಹಾರ ಮಾಡುವವರಿಗೆ ಈ ವಾರ ಸೂಕ್ತ ಸನ್ನಿವೇಶ ಸೃಷ್ಟಿಯಾಗಲಿದೆ. ಕೌಟುಂಬಿಕ ಜೀವನ ಶಾಂತಯುತವಾಗಿ ಇರುತ್ತದೆ. ಕಾನೂನು ವಿಚಾರಗಳಲ್ಲಿ ಅದೃಷ್ಟ ನಿಮ್ಮ ಕಡೆಗೆ ಇರುತ್ತದೆ. ಉತ್ಪಾದನೆ ಕ್ಷೇತ್ರದಲ್ಲಿ ಇರುವವರಿಗೆ ಅನುಕೂಲಕರವಾದ ವಾತಾವರಣ ಇರಲಿದೆ. ನಿರೀಕ್ಷಿತ ಪ್ರಮಾಣದಲ್ಲಿ ಹಣದ ಹರಿವು ಇರುವುದಿಲ್ಲ. ಶುಭದಿನ 20. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ



### ಮಿಥುನ

ವಾರದ ಆರಂಭದಲ್ಲಿ ಶುಭ ವಾರ್ತೆ ಕೇಳುವ ಯೋಗ ಇದೆ. ಆರೋಗ್ಯ ಚೆನ್ನಾಗಿರುತ್ತದೆ. ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ಬಹಳ ಕಾಲದಿಂದ ಕಾಡುತ್ತಿದ್ದ ಅನಾರೋಗ್ಯ ಸಮಸ್ಯೆಗಳು ನಿವಾರಣೆ ಆಗುತ್ತವೆ. ಇನ್ನು ದೈನಂದಿನ ವ್ಯವಹಾರಗಳಲ್ಲಿ ಶಿಸ್ತು ರೂಢಿ ಮಾಡಿಕೊಳ್ಳಲಿದ್ದೀರಿ. ವ್ಯಾಪಾರಸ್ಥರು ಉತ್ತಮ ಲಾಭ ಕಾಣುವ ಯೋಗ ಇದೆ. ಶುಭದಿನ 22. ವಿಷ್ಣು ಸಹಸ್ರನಾಮ ಪಠಿಸಿರಿ.



### ಕಟಕ

ಉತ್ಪಾದನೆ ವಿಭಾಗಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವವರು ಗುರಿ ಸಾಧನೆಗಾಗಿ ಪ್ರಯಾಣ ಮಾಡಬೇಕಾಗುತ್ತದೆ. ಕಾನೂನು ವ್ಯಾಜ್ಯಗಳಿದ್ದಲ್ಲಿ ನಿಮ್ಮ ಪರವಾಗಿ ಆಗಬಹುದು. ಸ್ಪರ್ಧೆಗಳಲ್ಲಿ ಭಾಗವಹಿಸುವವರಿಗೆ ಯಶಸ್ಸು ಪಡೆಯುವ ಸಾಧ್ಯತೆ ಹೆಚ್ಚಿದೆ. ನೀವು ಅದಕ್ಕಾಗಿ ನಡೆಸಿದ ತಯಾರಿಗೆ ಮೆಚ್ಚುಗೆಯ ಮಾತುಗಳನ್ನು ಕೇಳುತ್ತೀರಿ. ಆರೋಗ್ಯದ ಬಗ್ಗೆ ಗಮನ ನೀಡಬೇಕು. ಶುಭದಿನ 20. ಆಂಜನೇಯ ಸ್ತೋತ್ರ ಪಠಿಸಿರಿ.



### ಸಿಂಹ

ನಿಮ್ಮ ಹಣಕಾಸು ಸ್ಥಿತಿ ಉತ್ತಮ ಮಾಡಿಕೊಳ್ಳಲು ಹಲವು ಹೊಸ ಅವಕಾಶಗಳು ನಿಮಗೆ ದೊರೆಯಲಿವೆ. ಉದ್ಯೋಗಸ್ಥರಿಗೆ ಪರ್ಯಾಯ ಅವಕಾಶಗಳು ದೊರೆಯಲಿವೆ. ಈ ಹಿಂದೆ ಭಿನ್ನಾಭಿಪ್ರಾಯಗಳು ಇದ್ದಲ್ಲಿ ಅವುಗಳು ನಿವಾರಣೆ ಆಗುತ್ತವೆ. ಪ್ರೀತಿಪಾತ್ರರ ಜತೆ ಪ್ರವಾಸ ಮತ್ತು ಶಾಪಿಂಗ್ ಮಾಡಲಿದ್ದೀರಿ. ವಾರಾಂತ್ಯವು ಸಂತೋಷದಾಯಕವಾಗಿ ಇರುತ್ತದೆ. ಶುಭದಿನ 22. ಸೌಂದರ್ಯ ಲಹರಿ ಪಠಿಸಿರಿ.



### ಕನ್ಯಾ

ವ್ಯಾಪಾರಸ್ಥರಿಗೆ ಉತ್ತಮ ಪ್ರಗತಿ ಇದೆ. ನಿಮ್ಮ ಜತೆಗಿರುವವರು ಕೆಲಸದ ಬಗ್ಗೆ ಮೆಚ್ಚುಗೆಯ ಮಾತುಗಳನ್ನಾಡುತ್ತಾರೆ. ಉದ್ಯೋಗ ಬದಲಾವಣೆಗೆ ಯತ್ನಿಸುತ್ತಿರುವವರು ಇನ್ನೂ ಹೆಚ್ಚಿನ ಶ್ರಮ ಹಾಕಬೇಕು. ವಾರದ ಮಧ್ಯ ಭಾಗದಲ್ಲಿ ಹಣಕಾಸಿನ ಅನುಕೂಲ ಒದಗಿಬರಲಿದೆ. ಪ್ರೀತಿ ಪ್ರೇಮ ಸಂಬಂಧದಲ್ಲಿ ಇರುವವರು ಸುಮಧುರವಾದ ಸಮಯ ಕಳೆಯಲಿದ್ದೀರಿ. ಶುಭದಿನ 21. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.



### ತುಲಾ

ವಾರದ ಆರಂಭದಲ್ಲಿ ಪ್ರಗತಿ. ನಿಮ್ಮ ಶ್ರಮವೇ ಗುರಿಯನ್ನು ನಿರ್ಧಾರ ಮಾಡುತ್ತದೆ. ಮೇಲಧಿಕಾರಿಗಳ ಜತೆಗೆ ಉತ್ತಮ ಬಾಂಧವ್ಯ ಏರ್ಪಡುತ್ತದೆ. ನಿಧಾನವಾಗಿ ಜೀವನಶೈಲಿಯಲ್ಲಿ ಬದಲಾವಣೆ ಕಾಣಿಸಿಕೊಳ್ಳುತ್ತದೆ. ಮನೆಗೆ ಅಗತ್ಯ ಇರುವ ಸಾಮಗ್ರಿಗಳನ್ನು ಖರೀದಿಸಲು ನಿರ್ಧರಿಸುತ್ತೀರಿ. ಇದಕ್ಕಾಗಿ ಸಾಲ ಮಾಡುವ ಸಾಧ್ಯತೆಗಳಿವೆ. ಶುಭದಿನ 19. ಹನುಮಾನ್ ಚಾಲಿಸ್ ಪಠಿಸಿರಿ.



### ವೃಶ್ಚಿಕ

ದೂರ ಪ್ರಯಾಣ ಮಾಡಬೇಕಾದ ಸನ್ನಿವೇಶ ಎದುರಾಗುತ್ತದೆ. ವೃತ್ತಿ ಬದುಕಿನ ಏಳ್ಗೆಗೆ ಅವಕಾಶ ದೊರೆಯುತ್ತದೆ. ಪ್ರತಿಸ್ಪರ್ಧಿಗಳನ್ನು ಎದುರಿಸಲು ಈ ಹಿಂದಿಗಿಂತ ನಿಮ್ಮ ಸಾಮರ್ಥ್ಯ ಹೆಚ್ಚಾಗಲಿದೆ. ಬಹಳ ಕಾಲದಿಂದ ಬಾಕಿ ಉಳಿದಿದ್ದ ಯೋಜನೆಗಳನ್ನು ಪೂರ್ಣಗೊಳಿಸಲಿದ್ದೀರಿ. ವಾರದ ಮಧ್ಯ ಭಾಗದಲ್ಲಿ ಧಾರ್ಮಿಕ ಚಟುವಟಿಕೆಯಲ್ಲಿ ಭಾಗಿ ಆಗುವ ಸಾಧ್ಯತೆಗಳಿವೆ. ಶುಭದಿನ 22. ಈಶ್ವರನಿಗೆ ರುದ್ರಾಭಿಷೇಕ ಮಾಡಿಸಿ.



### ಧನಸ್ಸು

ವಾರದ ಆರಂಭದಲ್ಲಿ ಅತ್ಯುತ್ತಮವಾದ ಸಮಯ ಇದೆ. ಆರೋಗ್ಯ ಉತ್ತಮವಾಗಿರುತ್ತದೆ. ಯಾವುದಾದರೂ ಕಾನೂನು ವ್ಯಾಜ್ಯಗಳು ಎದುರಿಸುತ್ತಿದ್ದಲ್ಲಿ ವಿರೋಧಿಗಳ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ವ್ಯಾಪಾರ ಅಥವಾ ವಿಶ್ರಾಂತಿಗಾಗಿ ದೂರ ಪ್ರಯಾಣ ಮಾಡಬಹುದು. ಆರೋಗ್ಯದಲ್ಲಿ ಸಣ್ಣ ಪುಟ್ಟ ಏರಿಳಿತ ಕಾಣಿಸಿಕೊಳ್ಳಬಹುದು. ಶುಭದಿನ 23. ಗಣಪತಿಗೆ ದೂರ್ವಾರ್ಚನೆ ಮಾಡಿರಿ.



### ಮಕರ

ವಾರದ ಆರಂಭದಲ್ಲಿ ವೃತ್ತಿಪರರಿಗೆ ಮುಖ್ಯವಾದ ಅವಕಾಶಗಳು ದೊರೆಯುತ್ತವೆ. ದೊಡ್ಡ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುವ ಆಸೆ ಪೂರೈಸುತ್ತದೆ. ಉನ್ನತ ವಿದ್ಯಾಭ್ಯಾಸಕ್ಕಾಗಿ ಸ್ಥಳಾಂತರ ಆಗುವ ಸಾಧ್ಯತೆಗಳಿವೆ. ಸೋಂಕು, ಅಲರ್ಜಿ ಸಮಸ್ಯೆ ಇರುವವರು ಬಹಳ ಎಚ್ಚರಿಕೆಯಿಂದ ಇರಬೇಕು. ಆರೋಗ್ಯ ಬಾಧೆಗಳು ವಾರದ ಮಧ್ಯ ಭಾಗದ ತನಕ ಕಾಡಬಹುದು. ಶುಭದಿನ 20. ರಾಘವೇಂದ್ರ ಸ್ವಾಮಿಗಳ ಆರಾಧನೆ ಮಾಡಿರಿ.



### ಕುಂಭ

ಹಿರಿಯ ಅಧಿಕಾರಿಗಳ ಸಹಾಯದಿಂದ ನಿಮ್ಮ ಕೌಶಲವನ್ನು ಹೆಚ್ಚು ಮಾಡಿಕೊಳ್ಳುತ್ತೀರಿ. ವಾರದ ಆರಂಭದಲ್ಲಿ ಮಕ್ಕಳಿಂದ ನಿಮಗೆ ಶುಭ ಸುದ್ದಿ ಇದೆ. ಅವರಿಂದ ನೀವು ಹೆಮ್ಮೆ ಪಡುತ್ತೀರಿ. ವಿವಿಧ ಮೂಲಗಳಿಂದ ಸಂಪತ್ತು ಸಂಗ್ರಹ ಆಗುತ್ತದೆ. ಅದಕ್ಕೆ ತಕ್ಕಂತೆ ನಿಮ್ಮ ಬಜೆಟನ್ನು ಯೋಜನೆ ರೂಪಿಸಿಕೊಳ್ಳಬಹುದು. ವೈಯಕ್ತಿಕ ಸಂಬಂಧವು ಸೌಹಾರ್ದಯುತವಾಗಿ ಇರುತ್ತದೆ. ಶುಭದಿನ 22. ಗೋಪೂಜೆ ಮಾಡಿ. ಶಿವಕವಚ ಪಠಿಸಿರಿ.



### ಮೀನ

ಈ ವಾರ ವೈಯಕ್ತಿಕ ಹಾಗೂ ವೃತ್ತಿಪರ ಬದುಕಿನಲ್ಲಿ ಲಾಭ ಹಾಗೂ ಮಹತ್ತರವಾದ ಪ್ರಗತಿ ಕಾಣುವ ಯೋಗ ಇದೆ. ಸೇವಾ ವಲಯದಲ್ಲಿ ಕಾರ್ಯ ನಿರ್ವಹಿಸುವವರಿಗೆ ಪ್ರತಿಭೆಯನ್ನು ಪ್ರದರ್ಶಿಸಲು ಹಾಗೂ ಬಡ್ತಿ ಪಡೆಯಲು ಅತ್ಯುತ್ತಮ ಅವಕಾಶಗಳಿವೆ. ವಾರದ ಮಧ್ಯ ಭಾಗದಲ್ಲಿ ಪ್ರಗತಿ ಪಡೆದುಕೊಳ್ಳುತ್ತದೆ. ಶೈಕ್ಷಣಿಕ ಅರ್ಹತೆ ಹೆಚ್ಚಿಸಿಕೊಳ್ಳಲು ಪ್ರಯತ್ನಿಸುತ್ತೀರಿ. ಶುಭದಿನ 21. ದೇವ್ಯಪರಾದ ಕ್ಷಮಾಪನಾ ಸ್ತೋತ್ರ ಪಠಿಸಿರಿ.